RNU AIR DHARWAD

**AUGUST 14, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಭೂ ಸುಧಾರಣಾ ಕಾಯಿದೆ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆ ಅಂಗೀಕಾರ: ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಸಲು ಅವಕಾಶ.**

- **ಗ್ರಾಮೀಣ ಆಸ್ತಿ ತೆರಿಗೆ ಸಂಗ್ರಹಣೆಯಲ್ಲಿ ದೇಶದಲ್ಲೇ ದಾಖಲೆ ನಿರ್ಮಿಸಿದ ಕರ್ನಾಟಕ: ಗ್ರಾಮೀಣಾಭಿವೃದ್ಧಿ ಸಚಿವರಿಂದ ಮಾಹಿತಿ.**

- **ರಾಜ್ಯದ ಪಶು ವೈದ್ಯಕೀಯ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ.**

- **79 ನೇ ಸ್ವಾತಂತ್ರೋತ್ಸವದಹಿನ್ನೆಲೆ: 'ಹರ್ ಘರ್ ತಿರಂಗಾ ಅಭಿಯಾನ'ಕ್ಕೆ ದೇಶಾದ್ಯಂತ ಉತ್ತಮ ಸ್ಪಂದನೆ.**

**ಈಗ ವಾರ್ತೆಗಳ ವಿವರ**

***********

**ಗ್ರಾಮೀಣ ಭಾಗದಲ್ಲಿ ಸಣ್ಣ ಉದ್ದಿಮೆ ಸ್ಥಾಪಿಸಲು ಎರಡು ಎಕರೆವರೆಗೆ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಸಲು ಅವಕಾಶ ಕಲ್ಪಿಸುವ ಭೂ ಸುಧಾರಣಾ ಕಾಯ್ದೆ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರೆಯಿತು. ವಿಧೇಯಕ ಕುರಿತು ಮಾತನಾಡಿದ ಕಂದಾಯ ಸಚಿವ ಕೃ ್ಣ ಭೈರೇಗೌಡ, ಖಾಸಗಿ ವ್ಯಕ್ತಿಗಳ ಕೃಷಿ ಜಮೀನನ್ನು ಶಿಕ್ಷಣ ಸಂಸ್ಥೆಗಳು ಅಥವಾ ಸಣ್ಣ ಉದ್ದಿಮೆ, ಕೈಗಾರಿಕೆಗಳಿಗೆ ಖರೀದಿಸಲು ಸೆಕ್ಷನ್ 109 ರಡಿ ಈ ಹಿಂದೆಯೇ ಅನುಮತಿ ನೀಡಲಾಗಿತ್ತು. ಆದರೆ ಅನುಮತಿಗಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮನವಿ ಸಲ್ಲಿಸಬೇಕಿತ್ತು. ಈ ನಿಯಮಕ್ಕೆ ತಿದ್ದುಪಡಿ ಮಾಡಲಾಗಿದ್ದು, ಅಧಿಕಾರವನ್ನು ಆಯಾ ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ ಎಂದು ಸಚಿವರು ಹೇಳಿದರು.**

***********

ಗ್ರಾಮೀಣ ಆಸ್ತಿ ತೆರಿಗೆ ಸಂಗ್ರಹಣೆಯಲ್ಲಿ ಕರ್ನಾಟಕ ದೇಶದಲ್ಲೇ ದಾಖಲೆ ನಿರ್ಮಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಅಗತ್ಯ ನಿಯಮಾವಳಿಗಳ ತಿದ್ದುಪಡಿ, ಅಧಿಕಾರಿಗಳ ಕಾರ್ಯಕ್ಷಮತೆಯಿಂದಾಗಿ, 1 ಸಾವಿರದ 237 ಕೋಟಿ ರೂಪಾಯಿ ಆಸ್ತಿ ತೆರಿಗೆ ಸಂಗ್ರಹಿಸಲಾಗಿದೆ ಎಂದರು. ಅಕ್ರಮ-ಸಕ್ರಮ ಯೋಜನೆ ಜಾರಿಯಾಗಿ, ಇ-ಸ್ವತ್ತು ಪ್ರಕ್ರಿಯೆ ಆರಂಭವಾದರೆ, ಆಸ್ತಿ ತೆರಿಗೆ ಇನ್ನಷ್ಟು ಹೆಚ್ಚಳವಾಗಲಿದೆ ಎಂದು ಸಚಿವರು ತಿಳಿಸಿದರು.

*******

ರಾಜ್ಯದ ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ಭವಿ ್ಯಕ್ಕಾಗಿ ಹಂತ, ಹಂತವಾಗಿ ರಾಜ್ಯದಾದ್ಯಂತ ಶ್ರಮಿಕ ವಸತಿ ಶಾಲೆಗಳನ್ನು ಆರಂಭಿಸಲಾಗುವುದು ಎಂದು ಕಾರ್ಮಿಕ ಸಚಿವ ಸಂತೋ ್ ಲಾಡ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿ ಈ ವಿಷಯ ತಿಳಿಸಿದ ಅವರು, ತಮ್ಮ ತಮ್ಮ ಕ್ಷೇತ್ರಗಳಲ್ಲೂ ಶಾಲೆಗಳನ್ನು ಆರಂಭಿಸಬೇಕು ಎಂದು ಕೆಲವು ಶಾಸಕರು ಬೇಡಿಕೆ ಇಟ್ಟಿದ್ದಾರೆ. ಈ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದರು. 2025-26ನೇ ಸಾಲಿನ ಆಯವ್ಯಯದಲ್ಲಿ ಘೋ ್ಣೆ ಮಾಡಿದಂತೆ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ರಾಜ್ಯದ 31 ಜಿಲ್ಲೆಗಳಲ್ಲಿ ಶ್ರಮಿಕ ವಸತಿ ಶಾಲೆಗಳನ್ನು ಆರಂಭಿಸಲಾಗುವುದು. ಶಾಲೆಗಳ ಕಟ್ಟಡ ನಿರ್ಮಾಣ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಸಹ ಪ್ರಗತಿಯಲ್ಲಿದೆ ಎಂದು ಸಚಿವರು ತಿಳಿಸಿದರು.

*******

ಮುಜರಾಯಿ ಇಲಾಖೆ ವ್ಯಾಪ್ತಿಯ ಎಲ್ಲಾ ದೇವಸ್ಥಾನಗಳನ್ನು ಆಗಸ್ಟ್ 15 ರಿಂದ ಸಂಪೂರ್ಣ ಪ್ಲಾಸ್ಟಿಕ್ ಮುಕ್ತಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನ ಪರಿಷತ್ತಿನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು ಆಗಸ್ಟ್ 15 ರಿಂದ ದೇವಾಲಯಗಳಲ್ಲಿ ಕಡ್ಡಾಯವಾಗಿ ನೀರಿನ ಬಾಟಲ್ ಸೇರಿದಂತೆ ಪ್ಲಾಸ್ಟಿಕ್ ನಿಷೇಧ ಜಾರಿಗೊಳಿಸಲು ಧಾರ್ಮಿಕ ದತ್ತಿ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು. ದೇವಾಲಯಗಳ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಬಳಕೆ ಮಾಡುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ರೀತ್ಯ ಕ್ರಮ ಕೈಗೊಳ್ಳುವುದಕ್ಕೆ ಕಟ್ಟು ನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

*******

ರಾಜ್ಯದ ಪಶು ವೈದ್ಯಕೀಯ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಗೆ ಕ್ರಮ ವಹಿಸಲಾಗುವುದು ಎಂದು ಪಶುಸಂಗೋಪನೆ ಇಲಾಖೆ  ಸಚಿವ ಕೆ. ವೆಂಕಟೇಶ್ ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಸ್.ವಿ.ಸಂಕನೂರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಹೆಬ್ಬಾಳ ಪಶುವೈದ್ಯಕೀಯ ಮಹಾ ವಿದ್ಯಾಲಯದಲ್ಲಿ 91 ಹುದ್ದೆ ಮಂಜೂರಾಗಿದ್ದು, 31 ಹುದ್ದೆಗಳು ಖಾಲಿ ಇವೆ.

ಬೀದರ್ ಪಶುವೈದ್ಯಕೀಯ ಮಹಾ ವಿದ್ಯಾಲಯದಲ್ಲಿ 91 ಹುದ್ದೆ ಮಂಜೂರಾಗಿದ್ದು, 40 ಹುದ್ದೆಗಳು ಖಾಲಿ ಇವೆ. ಶಿವಮೊಗ್ಗ ಪಶು ಮಹಾವಿದ್ಯಾಲಯದಲ್ಲಿ 91 ಹುದ್ದೆ ಮಂಜೂರಾಗಿದ್ದು, 50 ಹುದ್ದೆಗಳು ಖಾಲಿ ಇವೆ. ಹಾಸನ ಪಶು ಮಹಾ ವಿದ್ಯಾಲಯದಲ್ಲಿ 91 ಹುದ್ದೆಗಳು ಮಂಜೂರಾಗಿದ್ದು, 51 ಹುದ್ದೆ ಖಾಲಿ ಇದೆ. ಗದಗ ಪಶು ಮಹಾ ವಿದ್ಯಾಲಯದಲ್ಲಿ 91 ಹುದ್ದೆ ಮಂಜೂರಾಗಿದ್ದು, 51 ಹುದ್ದೆ ಖಾಲಿ ಇದೆ. ಅದೇ ರೀತಿ ಅಥಣಿ ಪಶು ಮಹಾ ವಿದ್ಯಾಲಯದಲ್ಲಿ 77 ಹುದ್ದೆ ಮಂಜೂರಾಗಿದ್ದು, 65 ಹುದ್ದೆ ಖಾಲಿ ಇವೆ. ಒಳ ಮೀಸಲಾತಿ ಆದೇಶ ತೀರ್ಮಾನವಾದ ಕೂಡಲೇ ಈ ಎಲ್ಲಾ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

*******

ಧಾರವಾಡದ ಇಟ್ಟಿಗಟ್ಟಿಯಲ್ಲಿ ಏಕಸ್ ಇನ್ಫ್ರಾದ ಹುಬ್ಬಳ್ಳಿ ಡ್ಯೂರೆಬಲ್ ಗೂಡ್ಸ್ ಕ್ಲಸ್ಟರ್ ಕಂಪೆನಿ ಪ್ರಸ್ತಾಪಿಸಿದ ಎಲೆಕ್ಟ್ರಾನಿಕ್ ಘಟಕಗಳಿಗಾಗಿ ವಿಶೇಷ ಆರ್ಥಿಕ ವಲಯವನ್ನು ಕೇಂದ್ರ ಸರ್ಕಾರ ಗೆಜೆಟ್‌ನಲ್ಲಿ ಅಧಿಕೃತವಾಗಿ ಪ್ರಕಟಿಸಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಎಲೆಕ್ಟ್ರಾನಿಕ್ ಘಟಕಗಳ ಅವಶ್ಯಕತೆಯನ್ನು ಮನಗಂಡು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು, ಇಟ್ಟಿಗಟ್ಟಿಯಲ್ಲಿ ಎಲೆಕ್ಟ್ರಾನಿಕ್ ಘಟಕಗಳಿಗಾಗಿ ಎಸ್‌ಇಝೆಡ್  ಘೋಷಣೆಗೆ ಕೇಂದ್ರ ಸರ್ಕಾರದ ಗಮನ ಸೆಳೆದಿದ್ದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಮತ್ತು ಕೇಂದ್ರ ವಾಣಿಜ್ಯ ಹಾಗೂ ಕೈಗಾರಿಕ ಸಚಿವ ಪಿಯೂಷ ಗೋಯಲ್ ಅವರು ಸಚಿವ ಜೋಶಿ ಅವರ ಮನವಿಗೆ ಸ್ಪಂದಿಸಿ, ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ. ಹುಬ್ಬಳ್ಳಿ ಧಾರವಾಡ ಕೈಗಾರಿಕಾ ಪ್ರದೇಶದಲ್ಲಿ ಎಲೆಕ್ಟ್ರಾನಿಕ್ ಉತ್ಪನ್ನಗಳ ಉತ್ಪಾದನೆಗೆ ಈ ವಿಶೇಷ ಆರ್ಥಿಕ ವಲಯ ಉತ್ತೇಜನ ನೀಡಲಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಅವರು ತಮ್ಮ ಎಕ್ಸ್ ಖಾತೆಯಲ್ಲಿ ತಿಳಿಸಿದ್ದಾರೆ.

*******

79 ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾದಿನವಾದ ಇಂದು ರಾ ್ಟ್ರಪತಿ ದ್ರೌಪದಿ ಮುರ್ಮು ಅವರು ಸಂಜೆ 7 ಗಂಟೆಗೆ ರಾ ್ಟ್ರವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ಭಾ ಷಣವು ಆಕಾಶವಾಣಿ ಹಾಗೂ ದೂರದರ್ಶನದ ರಾಷ್ಟ್ರೀಯ ಜಾಲದಲ್ಲಿ ಪ್ರಸಾರವಾಗಲಿದ್ದು, ಪ್ರಾದೇಶಿಕ ಭಾಷಾ ಆವೃತ್ತಿಗಳನ್ನು ಆಕಾಶವಾಣಿ ರಾತ್ರಿ 9.30 ಕ್ಕೆ ಪ್ರಸಾರ ಮಾಡಲಿದೆ. .

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

79 ನೇ ಸ್ವಾತಂತ್ರೋತ್ಸವದಹಿನ್ನೆಲೆಯಲ್ಲಿ ಆರಂಭಗೊಂಡಿರುವ 'ಹರ್ ಘರ್ ತಿರಂಗಾ ಅಭಿಯಾನ'ಕ್ಕೆ ದೇಶಾದಂತ್ಯ ಉತ್ತಮ ಸ್ಪಂದನೆ ದೊರೆಯುತ್ತಿದೆ.

ಸಾರ್ವಜನಿಕರು, ವಿದ್ಯಾರ್ಥಿಗಳು, ಯುವಕರು ಸೇರಿದಂತೆ ಸಮಾಜದ ವಿವಿಧ ಸ್ತರಗಳು ಜನರು ತಮ್ಮ, ತಮ್ಮ ಮನೆ, ಕಚೇರಿಗಳ ಮೇಲೆ ರಾಷ್ಟ್ರಧ್ವಜ ಹಾರಿಸುವ ಮೂಲಕ ಅಭಿಯಾನದಲ್ಲಿ ಪಾಲ್ಗೊಂಡು ದೇಶಭಕ್ತಿ ಮೆರೆಯುತ್ತಿದ್ದಾರೆ. ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಕೇಂದ್ರ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು ತಮ್ಮ ಹುಬ್ಬಳ್ಳಿ ನಿವಾಸದಲ್ಲಿ ರಾಷ್ಟ್ರಧ್ವಜ ಹಾರಿಸಿದರು. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಪ್ರತಿಯೊಬ್ಬರೂ ನಮ್ಮ, ನಮ್ಮ ಮನೆಗಳಲ್ಲಿ ಹೆಮ್ಮೆಯಿಂದ ರಾಷ್ಟ್ರಧ್ವಜ ಹಾರಿಸೋಣ, ಇತರರನ್ನು ಪ್ರೇರೇಪಿಸೋಣ. ಹರ್ ಘರ್ ತಿರಂಗಾ ಡಾಟ್ ಕಾಮ್ ನಲ್ಲಿ ತಿರಂಗಾ ಜೊತೆಗಿನ ಸೆಲ್ಫಿಯನ್ನು ಅಪ್ಲೋಡ್ ಮಾಡಿ, ದೇಶವ್ಯಾಪಿ ಏಕತೆ ಮತ್ತು ದೇಶಭಕ್ತಿಯ ಆಚರಣೆಯಲ್ಲಿ ಸೇರೋಣ ಎಂದಿದ್ದಾರೆ.

ರಾಷ್ಟ್ರಧ್ವಜ ನಿರ್ಮಾಣಕ್ಕೆ ಅಗತ್ಯವಾದ ಖಾದಿ ಬಟ್ಟೆಗಳನ್ನು ಇಡೀ ದೇಶಕ್ಕೆ ಪೂರೈಸುತ್ತಿರುವ, ಧಾರವಾಡ ತಾಲೂಕು, ಗರಗ ಕ್ಷೇತ್ರೀಯ ಸೇವಾ ಸಂಘ, 1956 ರಲ್ಲಿ ಸ್ಥಾಪನೆಯಾದದ್ದು. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಸಂಘದ ಅಧ್ಯಕ್ಷ ಈಶ್ವರಪ್ಪ ಇಟಗಿ..

ಧ್ವನಿ: ಈಶ್ವರಪ್ಪ ಇಟಗಿ 53 ಸೆಕೆಂದುಗಳು

*******

ಭಾರತ ವಿಭಜನೆಯ ಸ್ಮರಣಾರ್ಥ ಇಂದು ವಿಭಜನ್ ವಿಭೀ ಽಣ ಸ್ಮೃತಿ ದಿವಸ್ ಆಚರಿಸಲಾಗುತ್ತಿದೆ. ಆಗಸ್ಟ್ 14 ರಂದು ಆಚರಿಸಲಾಗುವ ವಾರ್ಷಿಕ ರಾಷ್ಟ್ರೀಯ ಸ್ಮರಣೆಯ ಈ ದಿನದಂದು 1947 ರ ಭಾರತ ವಿಭಜನೆಯ ಸಮಯದಲ್ಲಿ ಬಲಿಯಾದವರು ಮತ್ತು ಜನರ ನೋವುಗಳನ್ನು ಸ್ಮರಿಸಲಾಗುತ್ತದೆ. ವಿಭಜನೆಯ ಸಂದರ್ಭದಲ್ಲಿ ಹಲವಾರು ಕುಟುಂಬಗಳು ಸ್ಥಳಾಂತರಗೊಂಡವು ಮತ್ತು ಅನೇಕರು ತಮ್ಮ ಪ್ರಾಣ ಕಳೆದುಕೊಂಡರು. ಸಾಮಾಜಿಕ ವಿಭಜನೆಗಳು, ಅಸಂಗತತೆಯನ್ನು ತೆಗೆದುಹಾಕುವ ಮತ್ತು ಏಕತೆ, ಸಾಮಾಜಿಕ ಸಾಮರಸ್ಯ ಮತ್ತು ಮಾನವ ಸಬಲೀಕರಣದ ಮನೋಭಾವವನ್ನು ಮತ್ತ ಷ್ಟ ಬಲಪಡಿಸುವ ಅಗತ್ಯವನ್ನು ಭಾರತೀಯರಿಗೆ ನೆನಪಿಸುವ ಗುರಿಯನ್ನು ಇದು ಹೊಂದಿದೆ.

*******

ಆದಿಕರ್ಮಯೋಗಿ ಧರ್ತಿ ಆಬಾ ಜನಜಾತಿಯ ಗ್ರಾಮ ಉತ್ಕ ಽ ಯೋಜನೆಯಡಿ ಆಯ್ಕೆಯಾಗಿರುವ ದಾವಣಗೆರೆ ಜಿಲ್ಲೆಯ 44 ಗ್ರಾಮಗಳ ಪರಿಶಿ ಷ್ಟ ಪಂಗಡದವರ ಸಮಗ್ರ ಅಭಿವೃದ್ಧಿಗಾಗಿ ಕ್ರಿಯಾ ಯೋಜನೆ ತಯಾರಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದ್ದಾರೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಭೂ ಸುಧಾರಣಾ ತಿದ್ದುಪಡಿ ವಿಧೇಯಕಕ್ಕೆ ವಿಧಾನ ಸಭೆ ಅಂಗೀಕಾರ: ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಸಲು ಅವಕಾಶ.

ಗ್ರಾಮೀಣ ಆಸ್ತಿ ತೆರಿಗೆ ಸಂಗ್ರಹಣೆಯಲ್ಲಿ ದೇಶದಲ್ಲೇ ದಾಖಲೆ ನಿರ್ಮಿಸಿದ ಕರ್ನಾಟಕ: ಗ್ರಾಮೀಣಾಭಿವೃದ್ಧಿ ಸಚಿವರಿಂದ ಮಾಹಿತಿ.

ರಾಜ್ಯದ ಪಶು ವೈದ್ಯಕೀಯ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ.

79 ನೇ ಸ್ವಾತಂತ್ರೋತ್ಸವದಹಿನ್ನೆಲೆ: 'ಹರ್ ಘರ್ ತಿರಂಗಾ ಅಭಿಯಾನ'ಕ್ಕೆ ದೇಶಾದ್ಯಂತ ಉತ್ತಮ ಸ್ಪಂದನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********